ಇಲಾಖೆಯ ಅಧಿಕಾರಿಗಳು ಶಿಷ್ಟಾಚಾರದ ಕರ್ತವ್ಯಕ್ಕೆ ನಿಯೋಜಿತರಾಗುವುದರಿಂದ ಸಾರ್ವಜನಿಕರಿಗೆ ಅವರ ಕೆಲಸ ಕಾರ್ಯಗಳನ್ನು ಮಾಡುವತ್ತ ನಿರ್ಣಯ ಕೈಗೊಳ್ಳುವಲ್ಲಿ ತೊಂದರೆಯಾಗುತ್ತಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ?

ಆ) ಹಾಗಿದ್ದಲ್ಲಿ, ಇದಕ್ಕೆ ಬದಲೀ ವ್ಯವಸ್ಥೆ ಕಲ್ಪಿಸಲು ಸರ್ಕಾರ ಯೋಚಿಸುವುದೇ?

ಇ) ಮಂತ್ರಿಗಳ ಪ್ರವಾಸ ಸಂದರ್ಭದಲ್ಲಿಯೂ ಸಹ ಅನಿವಾರ್ಯ ಪರಿಸ್ಥಿತಿ ಹೊರತುಪಡಿಸಿ ನಿರ್ಣಯ ಕೈಗೊಳ್ಳುವ ಅಧಿಕಾರವನ್ನು ಇಲಾಖೆಯ ಸಮಾನಾಂತರ ಅಧಿಕಾರಿಗಳಿಗೆ ನೀಡುವ ಉದ್ದೇಶ ಸರ್ಕಾರಕ್ಕೆ ಇದೆಯೇ?

ಈ) ಹಾಗಿದ್ದಲ್ಲಿ, ಈ ಬಗ್ಗೆ ಸರ್ಕಾರ ತೆಗೆದುಕೊಳ್ಳಲಿರುವ ಕ್ರಮಗಳೇನು?

ಶ್ರೀ ಎಸ್.ಎಂ. ಕೃಷ್ಣ (ಮುಖ್ಯಮಂತ್ರಿಗಳು) :

ಅ) ಇಲ್ಲ.

ಆ) ಮೈಸೂರು, ಗುಲ್ಬರ್ಗಾ, ಬೆಳಗಾಂ ಹಾಗೂ ದಕ್ಷಿಣ ಕನ್ನಡ ಜಿಲ್ಲೆಗಳಲ್ಲಿ ಶಿಷ್ಟಾಚಾರ ಕೆಲಸವನ್ನು ನಿರ್ವಹಿಸಲು ಒಂದು ತಹಶೀಲ್ದಾರ್ 'ಬಿ' ಗುಂಪು ಹುದ್ದೆಯನ್ನು ಪ್ರತ್ಯೇಕವಾಗಿ ಸೃಜಿಸಲಾಗಿದೆ. ಉಳಿದ ಸ್ಥಳಗಳಲ್ಲಿಯೂ ಸಹ ಸಾರ್ವಜನಿಕ ಕೆಲಸಗಳಿಗೆ ಅಡೆತಡೆ ಇಲ್ಲದೆ ಶಿಷ್ಟಾಚಾರ ಕೆಲಸವನ್ನು ಕಂದಾಯ ಇಲಾಖೆಯ ಅಧಿಕಾರಿಗಳು ನಿರ್ವಹಿಸುತ್ತಿದ್ದಾರೆ.

ಇ) ಇಲ್ಲ.

ಈ) ಇಲ್ಲ.

ವಿಧಾನ ಸಭೆ ಸದಸ್ಯರ ತರಬೇತಿ

4452 - ಶ್ರೀ ಗುರುಸ್ವಾಮಿ ಎ.ಎಸ್. (ಚಾಮುಂಡೇಶ್ವರಿ) : ಮಾನ್ಯ ಕಾನೂನು ಮತ್ತು ಸಂಸದೀಯ ವ್ಯವಹಾರಗಳ ಸಚಿವರು ಈ ಕೆಳಕಂಡ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವರೆ?

ಅ) ಹೊಸದಾಗಿ ಚುನಾಯಿತರಾಗಿರುವ ವಿಧಾನ ಸಭಾಸದಸ್ಯರಿಗೆ ವಿವಿಧ ಇಲಾಖೆಗಳ ಕಾರ್ಯ ನಿರ್ವಹಣೆ ಕುರಿತು ಮಾಹಿತಿ ನೀಡುವ ಕಾರ್ಯಾಗಾರ ಏರ್ಪಡಿಸುವ ಉದ್ದೇಶ ಸರ್ಕಾರಕ್ಕೆ ಇದೆಯೇ?

ಆ) ವಿಧಾನ ಸಭಾ ಸದಸ್ಯರು ಕಾರ್ಯಾಂಗದ ಕರ್ತವ್ಯ ನಿರ್ವಹಣೆ ಮತ್ತು ಅವರ ಪರಿಮಿತಿ ಅರಿತು ಅದರ ವ್ಯಾಪ್ತಿಯೊಳಗೆ ಜನಪರ ಕಾರ್ಯಗಳನ್ನು ಕೈಗೊಳ್ಳಲು ಮಾಹಿತಿ ನೀಡುವ ವಿಚಾರದಲ್ಲಿ ಸರ್ಕಾರದ ನಿಲುವೇನು?

ಇ) ಹಾಗಿದ್ದಲ್ಲಿ ಈ ನಿಟ್ಟಿನಲ್ಲಿ ಯಾವ ಕಾರ್ಯಕ್ರಮಗಳನ್ನು ಹಮ್ಮಿಕೊಳ್ಳಲಾಗಿದೆ?

ಶ್ರೀ ಡಿ.ಬಿ. ಚಂದ್ರೇಗೌಡ (ಕಾನೂನು ಮತ್ತು ಸಂಸದೀಯ ವ್ಯವಹಾರಗಳ ಸಚಿವರು) :

ಅ) ಹೊಸದಾಗಿ ಚುನಾಯಿತರಾಗಿರುವ ವಿಧಾನ ಸಭಾ ಸದಸ್ಯರಿಗೆ ಆಗಿಂದಾಗ್ಗೆ ಸಂಸದೀಯ

ವ್ಯವಹಾರಗಳ ವಿಷಯದಲ್ಲಿ ವಿಧಾನ ಮಂಡಲವು ಕಾರ್ಯಾಗಾರಗಳನ್ನು ನಡೆಸುತ್ತಿದೆ. ವಿವಿಧ ಇಲಾಖೆಗಳ ಕಾರ್ಯನಿರ್ವಹಣೆ ಕುರಿತು ಮಾಹಿತಿ ನೀಡಲು ಕಾರ್ಯಾಗಾರವನ್ನು ಏರ್ಪಡಿಸುವ ಕುರಿತು ಪರಿಶೀಲಿಸಲಾಗುವುದು.

ಆ) ಈ ಬಗ್ಗೆ ಎಲ್ಲಾ ಅವಶ್ಯಕ ಮಾಹಿತಿ ನೀಡಲು ಸರ್ಕಾರ ಬದ್ಧ.

ಇ) ಈ ವಿಷಯದ ಬಗ್ಗೆ ಎಲ್ಲಾ ಇಲಾಖೆಗಳನ್ನು ಸಂಪರ್ಕಿಸಿ ಸೂಕ್ತ ನಿರ್ಧಾರವನ್ನು ತೆಗೆದುಕೊಳ್ಳಲಾಗುವುದು.

ದ. ಕನ್ನಡ ಮತ್ತು ಉಡುಪಿ ಜಿಲ್ಲೆಯಲ್ಲಿರುವ ಅಣೆಕಟ್ಟುಗಳು

4453 - ಶ್ರೀ ಹೆಚ್. ಗೋಪಾಲ ಭಂಡಾರಿ (ಕಾರ್ಕಳ) : ಮಾನ್ಯ ಸಣ್ಣ ನೀರಾವರಿ ರಾಜ್ಯ ಸಚಿವರು ಈ ಕೆಳಕಂಡ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವರೆ?

ಅ) ದಕ್ಷಿಣ ಕನ್ನಡ ಮತ್ತು ಉಡುಪಿ ಜಿಲ್ಲೆಗಳಲ್ಲಿ ಸಾಕಷ್ಟು ನದಿಗಳ ನೀರು ಬಹುತೇಕ ಉಪಯೋಗವಾಗದೆ ಸಮುದ್ರ ಸೇರುತ್ತಿರುವುದು ನಿಜವಲ್ಲವೆ?

ಆ) ಹಾಗಿದ್ದಲ್ಲಿ ಕೃಷಿಗೆ ಉಪಯೋಗವಾಗುವಂತೆ ಪರಸ್ಪರ ಜೋಡಿಸುವ ಪ್ರಸ್ತಾಪ ಇದೆಯೇ?

ಇ) ಹಾಗಿದ್ದಲ್ಲಿ, ಅದನ್ನು ಯಾವಾಗ ಕಾರ್ಯಾರಂಭ ಮಾಡಲಾಗುವುದು?

ಈ) ಉಡುಪಿ ಜಿಲ್ಲೆಯಲ್ಲಿರುವ ಸಣ್ಣ ನೀರಾವರಿ ಇಲಾಖೆಯ ವ್ಯಾಪ್ತಿಗೆ ಸೇರಿದ ವೆಂಟೆಡ್ ಡ್ಯಾಂಗಳು ಎಷ್ಟು?

ಶ್ರೀ ಎಸ್. ಕುಮಾರ್ ಬಂಗಾರಪ್ಪ (ಸಣ್ಣ ನೀರಾವರಿ ರಾಜ್ಯ ಸಚಿವರು) :

ಅ) ಹೌದು. ನಿಜ.

ಆ) ಇಲ್ಲ.

ಇ) ನದಿಗಳ ಪರಿಸ್ಪರ ಜೋಡಣೆಯ ಪ್ರಸ್ತಾಪವನ್ನು ಸಣ್ಣ ನೀರಾವರಿ ಇಲಾಖೆಯಿಂದ ತಯಾರಿಸಿಲ್ಲದ ಕಾರಣ ಈ ಪ್ರಶ್ನೆ ಉದ್ಭವಿಸುವುದಿಲ್ಲ.

ಈ) 36 ವೆಂಟೆಡ್ ಡ್ಯಾಂಗಳು ಇರುತ್ತವೆ.

ಆಕ್ಟ್ರಾಯ್ ಹಣ ಬಿಡುಗಡೆ

4455 - ಶ್ರೀ ಹೊನ್ನಳ್ಳಿ ಜಬ್ಬಾರ್ ಖಾನ್ ಹೈಯತ್ ಖಾನ್ (ಹುಬ್ಬಳ್ಳಿ) : ಮಾನ್ಯ ನಗರಾಭಿವೃದ್ಧಿ ಸಚಿವರು ಈ ಕೆಳಕಂಡ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವರೆ?

ಅ) ಹುಬ್ಬಳ್ಳಿ-ಧಾರವಾಡ ಮಹಾನಗರಪಾಲಿಕೆಗೆ ಕಳೆದ 3 ವರ್ಷಗಳಲ್ಲಿ ಆಕ್ಟ್ರಾಯ್ ಹಣ